ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 31/8/2020

# ಒಂದು ದೇಶ, ಒಂದು ಚುನಾವಣೆ ಸನ್ನಿಹಿತ?

## ದೇಶಕ್ಕೊಂದು ಮತದಾರರ ಪಟ್ಟಿ ಸಿದ್ಧತೆಗಾಗಿ ಪಿಎಂಒ ಸಭೆ

**ನವದೆಹಲಿ:** ಬಿಜೆಪಿಯ ಅತ್ಯಂತ ಮಹತ್ವಾಕಾಂಕ್ಷೆಯ "ಒಂದು ದೇಶ ಒಂದು ಚುನಾವಣೆ" ದಿನಗಳು ಸನ್ನಿಹಿತವಾಗುತ್ತಿದೆಯೇ?

ಹೌದು ಎನ್ನುತ್ತಿವೆ ಇತ್ತೀಚಿನ ಬೆಳವಣಿಗೆಗಳು. ಆ.13ರಂದು ಪ್ರಧಾನಿ ಕಾರ್ಯಾಲಯ 'ದೇಶಕ್ಕೊಂದೇ ಮತದಾರರ ಪಟ್ಟಿ' ತಯಾರಿಸುವ ಸಲುವಾಗಿ ಅಧಿಕಾರಿಗಳ ಸಭೆ ನಡೆಸಿದೆ. ಸದ್ಯ ಕೇಂದ್ರ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯೋಗಗಳು ಪ್ರತ್ಯೇಕವಾಗಿ ತಮ್ಮದೇ ಆದ ಮತದಾರರ ಪಟ್ಟಿ ತಯಾರಿಸಿಕೊಳ್ಳುತ್ತಿವೆ. ಹೀಗಾಗಿ, ದೇಶಕ್ಕೊಂದೇ ಮತದಾರರ ಪಟ್ಟಿ ಸಿದ್ಧವಾದರೆ, ಒಂದು ದೇಶ, ಒಂದು ಚುನಾವಣೆ ನಡೆಸುವುದು ಸುಲಭವಾಗುತ್ತದೆ ಎಂಬ ಉದ್ದೇಶದಿಂದ ಈ ಕುರಿತಂತೆ ಸಭೆ ನಡೆಸಲಾಗಿದೆ.

ಪ್ರಧಾನಮಂತ್ರಿಗಳ ಪ್ರಿನ್ಸಿಪಲ್ ಸೆಕ್ರೆಟರಿ ಪಿ.ಕೆ.ಮಿಶ್ರಾ ಅವರ ನೇತೃತ್ವದಲ್ಲಿ ಈ ಸಭೆ ನಡೆದಿದೆ. ಸಭೆಯಲ್ಲಿ ಸಂಪುಟ ಕಾರ್ಯದರ್ಶಿ ರಾಜೀವ್ ಚೌಬಾ, ಸಂಸದೀಯ ಕಾರ್ಯದರ್ಶಿ ಜಿ. ನಾರಾಯಣ ರಾಜು, ಪಂಚಾಯತ್ ರಾಜ್ ಕಾರ್ಯದರ್ಶಿ ಸುನೀಲ್ ಕುಮಾರ್ ಮತ್ತು ಕೇಂದ್ರ ಚುನಾವಣಾ ಆಯೋಗದ ಮಹಾ ಕಾರ್ಯದರ್ಶಿ ಉಮೇಶ್ ಸಿನ್ಹಾ ಸೇರಿದಂತೆ ಮೂವರು ಭಾಗಿಯಾಗಿದ್ದರು.


ಒಂದು ವೇಳೆ ದೇಶಕ್ಕೊಂದು ಮತದಾರರ ಪಟ್ಟಿ ಸಿದ್ಧವಾದರೆ, ಏಕಕಾಲದಲ್ಲಿ ಚುನಾವಣೆ ನಡೆಸುವ ಉದ್ದೇಶಕ್ಕೆ ಇನ್ನಷ್ಟು ಸನಿಹವಾದಂತಾಗುತ್ತದೆ ಎಂಬುದು ಕೇಂದ್ರ ಸರ್ಕಾರದ ಚಿಂತನೆ.

**ಎರಡು ಆಯ್ಕೆಗಳ ಬಗ್ಗೆ ಚರ್ಚೆ** ಈ ಸಭೆಯಲ್ಲಿ ಪ್ರಮುಖವಾಗಿ ಎರಡು ಆಯ್ಕೆಗಳ ಬಗ್ಗೆ ಚರ್ಚೆಯಾಗಿದೆ. ಒಂದು, ಆರ್ಟಿಕಲ್ 243ಕೆ ಮತ್ತು 243ಝಡ್ಎಗೆ ಸಾಂವಿಧಾನಿಕ ತಿದ್ದುಪಡಿ ತರುವುದು. ಈ ಮೂಲಕ ಎಲ್ಲಾ ಚುನಾವಣೆಗಳಿಗೆ ಒಂದೇ ಮತದಾರರ ಪಟ್ಟಿ ಬಳಕೆ ಮಾಡುವಂತೆ ಕಡ್ಡಾಯ ಮಾಡುವುದು.

ಎರಡು, ರಾಜ್ಯಸರ್ಕಾರಗಳ ಮನವೊಲಿಕೆ ಮಾಡಿ, ಕೇಂದ್ರ ಚುನಾವಣಾ ಆಯೋಗ ರೂಪಿಸುವ ಮತದಾರರ ಪಟ್ಟಿಯನ್ನೇ ಸ್ಥಳೀಯ ಸಂಸ್ಥೆಗಳಾದ ಮಹಾನಗರ, ನಗರಪಾಲಿಕೆ ಮತ್ತು ಜಿಲ್ಲಾ, ತಾಲೂಕು, ಗ್ರಾಮ ಪಂಚಾಯತ್ ಚುನಾವಣೆಗಳಲ್ಲೂ ಬಳಕೆಯಾಗುವಂತೆ ಮಾಡುವುದಾಗಿದೆ.

### ಪ್ರಣಾಳಿಕೆಯಲ್ಲಿ ಹೇಳಿದ್ದ ಬಿಜೆಪಿ

2019ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಒಂದು ದೇಶ, ಒಂದು ಚುನಾವಣೆ ಬಗ್ಗೆ ಭರವಸೆ ನೀಡಿತ್ತು. ಅದರಂತೆ ದೇಶದಲ್ಲಿ ಒಮ್ಮೆಗೇ ಲೋಕಸಭೆ, ವಿಧಾನಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಬಗ್ಗೆ ತಯಾರಿ ನಡೆಸುತ್ತಿದೆ. ಒಂದು ವೇಳೆ ದೇಶಕ್ಕೊಂದೇ ಮತದಾರರ ಪಟ್ಟಿ ಸಿದ್ಧವಾದರೆ ಏಕಕಾಲದಲ್ಲಿ ಚುನಾವಣೆ ನಡೆಸುವುದು ಸುಲಭವಾಗುತ್ತದೆ ಎಂಬ ಉದ್ದೇಶ ಕೇಂದ್ರ ಸರ್ಕಾರದ್ದು.



- ಲೋಕಸಭೆ, ವಿಧಾನಸಭೆ, ಸ್ಥಳೀಯ ಸಂಸ್ಥೆಗಳಿಗೆ ಒಂದೇ ಬಾರಿಗೆ ಚುನಾವಣೆ
- ಸದ್ಯ ಕೇಂದ್ರ, ರಾಜ್ಯ ಚು. ಆಯೋಗಗಳಿಂದ ಪ್ರತ್ಯೇಕ ಮತದಾರರ ಪಟ್ಟಿ ರಚನೆ
- ಒಂದೇ ಮತದಾರರ ಪಟ್ಟಿ ರೂಪಿಸಿದಲ್ಲಿ ಒಂದೇ ಬಾರಿಗೆ ಎಲ್ಲಾ ಚುನಾವಣೆಗಳನ್ನು ನಡೆಸಲು ಅನುಕೂಲ

### ಏನಿದು 243ಕೆ ಮತ್ತು 243ಝಡ್ಎ?

[illegible]

### ರಾಜ್ಯಗಳ ಮನವೊಲಿಕೆ

ಆ.13ರಂದು ನಡೆದ ಸಭೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಸಿದ್ಧಪಡಿಸುವ ಮತದಾರರ ಪಟ್ಟಿಯನ್ನೇ ಬಳಕೆ ಮಾಡುವಂತೆ ರಾಜ್ಯ ಚುನಾವಣಾ ಆಯೋಗಗಳ ಮನವೊಲಿಕೆ ಮಾಡುವ ಬಗ್ಗೆ ನಿಲುವು ವ್ಯಕ್ತಪಡಿಸಲಾಗಿದೆ. ಹೀಗಾಗಿ, ಪಿ.ಕೆ. ಮಿಶ್ರಾ ಅವರು, ಕ್ಯಾಬಿನೆಟ್ ಕಾರ್ಯದರ್ಶಿ ರಾಜೀವ್ ಚೌಬಾ ಅವರಿಗೆ ರಾಜ್ಯ ಸರ್ಕಾರಗಳನ್ನು ಸಂಪರ್ಕಿಸುವಂತೆ ಸೂಚಿಸಿದ್ದಾರೆ ಎಂದು ತಿಳಿದುಬಂದಿದೆ.

### ಕೆಲವು ರಾಜ್ಯಗಳಲ್ಲಿ ಮಾತ್ರ

ಕರ್ನಾಟಕ ಸೇರಿದಂತೆ ಕೆಲವು ರಾಜ್ಯಗಳು ಸ್ಥಳೀಯ ಸಂಸ್ಥೆ ಚುನಾವಣೆಗಳಿಗೆ ಕೇಂದ್ರ ಚುನಾವಣಾ ಆಯೋಗದ ಮತದಾರರ ಪಟ್ಟಿಯನ್ನೇ ಬಳಸಿಕೊಳ್ಳುತ್ತವೆ. ಆದರೆ, ಉತ್ತರ ಪ್ರದೇಶ, ಉತ್ತರಾಖಂಡ, ಒಡಿಶಾ, ಅಸ್ಸಾಂ, ಮಧ್ಯಪ್ರದೇಶ, ಕೇರಳ, ಅರುಣಾಚಲ ಪ್ರದೇಶ, ನಾಗಲ್ಯಾಂಡ್ ಮತ್ತು ಕೆಲವು ಕೇಂದ್ರಾಡಳಿತ ಪ್ರದೇಶಗಳು ತಮ್ಮದೇ ಆದ ಮತದಾರರ ಪಟ್ಟಿ ಮಾಡಿಕೊಳ್ಳುತ್ತವೆ.

### ಇದೇನು ಹೊಸದಲ್ಲ, ಹಿಂದೆಯೂ ಆಗಿತ್ತು ಚರ್ಚೆ

2015ರಲ್ಲಿ ಬಿಡುಗಡೆಯಾದ ಕಾನೂನು ಆಯೋಗದ 255ನೇ ವರದಿಯಲ್ಲಿ ಈ ಬಗ್ಗೆ ಪ್ರಸ್ತಾಪಿತವಾಗಿತ್ತು. ಕೇಂದ್ರ ಮತ್ತು ರಾಜ್ಯ ಚುನಾವಣಾ ಆಯೋಗಗಳು ಪ್ರತ್ಯೇಕವಾಗಿ ಮತದಾರರ ಪಟ್ಟಿ ರೂಪಿಸುವುದು ಬೇಡ. ಎರಡೂ ಸಂಸ್ಥೆಗಳು ಒಂದೇ ಪಟ್ಟಿ ರೂಪಿಸಬೇಕು. ಇದರಿಂದ ಮತದಾರರ ಹೆಸರು ನಕಲಾಗುವುದು ತಪ್ಪುತ್ತದೆ ಹಾಗೂ ಮತದಾರರಲ್ಲಿನ ಗೊಂದಲಗಳೂ ಬಗೆಹರಿಯುತ್ತವೆ ಎಂದು ಹೇಳಲಾಗಿತ್ತು. 1999 ಮತ್ತು 2004ರಲ್ಲೂ ಈ ಬಗ್ಗೆ ಪ್ರಸ್ತಾಪಿಸವಾಗಿತ್ತು.